(2)

# ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ:- ಬಡತನದ ರೇಖೆಗಿಂತ ಕೆಳಗಿರುವ ಕುಟುಂಬದಲ್ಲಿನ ದೃಷ್ಟಿಹೀನ ಮಹಿಳೆಯರಿಗೆ ಪ್ರತಿ ಹೆರಿಗೆಯ ನಂತರ 2 ವರ್ಷಗಳ ಅವಧಿಗೆ ಮಾಸಿಕ ರೂ.2000/- ಶಿಶುಪಾಲನಾ ಭತ್ಯೆ ನೀಡುವ ಬಗ್ಗೆ.

ಓದಲಾಗಿದೆ: ನಿರ್ದೇಶಕರು, ವಿಕಲಚೇತನರ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ,ಬೆಂಗಳೂರು ಇವರ ಪತ್ರ ಸಂಖ್ಯೆ:ವಿಹಿನಾಸಇ/ಯೋಜನೆ/ಅಂ.ಮ.ಅ.ಬ/11/ 2013-14/1364, ದಿನಾಂಕ: 24-7-2013.

ಪ್ರಸ್ತಾವನೆ:

ಮೇಲೆ ಓದಲಾದ ದಿನಾಂಕ: 24-7-2013ರ ಪತ್ರದಲ್ಲಿ, ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ ಇವರು, ಮಾನ್ಯ ಮುಖ್ಯ ಮಂತ್ರಿಯವರು ದಿನಾಂಕ:12-7-2013ರಂದು ಮಂಡಿಸಿರುವ 2013-14ನೇ ಸಾಲಿನ ಆಯವ್ಯಯ ಭಾಷಣದ ಕ್ರಮಸಂಖ್ಯೆ: 231ರಲ್ಲಿ, 'ಬಡತನದ ರೇಖೆಗಿಂತ ಕೆಳಗಿರುವ ಕುಟುಂಬಗಳಲ್ಲಿನ ದೃಷ್ಟಿಹೀನ ಮಹಿಳೆಯರಿಗೆ 2 ಹೆರಿಗೆಯವರೆಗೆ ಪ್ರತಿ ಹೆರಿಗೆ ನಂತರ 2 ವರ್ಷ ಅವಧಿಗೆ ಆರೋಗ್ಯ ಹಾಗೂ ಪೌಷ್ಠಿಕ ಆಹಾರ ದೃಷ್ಟಿಯಿಂದ ತಿಂಗಳಿಗೆ ರೂ.2000/- ಗಳನ್ನು ಶಿಶುಪಾಲನ ಭತ್ಯೆಯನ್ನು ನೀಡಲಾಗುವುದೆಂದು' ಘೋಷಿಸಿರುತ್ತಾರೆ.

ನಿರ್ದೇಶಕರು, ವಿಕಲಚೇತನ ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಬೆಂಗಳೂರು ಇವರು ಪ್ರಸ್ತಾವನೆಯ ಬಗ್ಗೆ ಆಯವ್ಯಯ ಭಾಷಣದಲ್ಲಿ ಬಡತನದ ರೇಖೆಗಿಂತ ಕೆಳಗಿರುವ ಕುಟುಂಬಗಳಲ್ಲಿನ ದೃಷ್ಟಿಹೀನ ಮಹಿಳೆಯರಿಗೆ ಎಂಬುದರ ಬದಲಾಗಿ ಬಡ ಕುಟುಂಬದಲ್ಲಿರುವ ದೃಷ್ಟಿಹೀನ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ ಎಂದು ಬದಲಾಯಿಸಬಹುದೆಂದು ಅಭಿಪ್ರಾಯಡುತ್ತಾ, ಬಡಕುಟುಂಬದಲ್ಲಿ ಜನಿಸುವ ಮಕ್ಕಳ ಆರೈಕೆ, ಲಾಲನೆ, ಪೋಷಣೆ ಮಾಡುವ ಸಂಪೂರ್ಣ ಜವಾಬ್ದಾರಿಯು ತಾಯಿಯರದ್ದಾಗಿರುತ್ತದೆ. ಆದರೆ ದೃಷ್ಟಿದೋಷವುಳ್ಳ ಮಹಿಳೆಯರು ಅವರ ಸ್ವಂತ ಕೆಲಸ ಕಾರ್ಯಗಳನ್ನು ಮಾಡಿಕೊಳ್ಳಬೇಕಾದರೆ, ಎಲ್ಲಾ ಹಂತದಲ್ಲಿ ಇತರರನ್ನು ಅವಲಂಬಿಸಬೇಕಾದ ಅನಿವಾರ್ಯತೆ ಇರುತ್ತದೆ. ಅಂತಹ ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳ ಆರೈಕೆ ಮಾಡಿ ಪಾಲನೆ ಪೋಷಣೆ ಮಾಡುವುದು ತುಂಬಾ ಕಷ್ಟದ ಕೆಲಸವಾಗಿದ್ದು, ಮಗುವಿನ ದೈನಂದಿನ ಚಟುವಟಿಕೆಗಳನ್ನು ಗಮನಿಸುವುದು ಇವರಿಂದ ಸಾಧ್ಯವಾಗದ ಕಾರಣ ಮಗು ಹುಟ್ಟಿದಾಗಿನಿಂದ ಕನಿಷ್ಠ 2 ವರ್ಷಗಳ ಅವಧಿವರೆಗೆ ಮಗುವಿನ ಆರೈಕೆ ಮಾಡಲು ಒಬ್ಬ ಸಹಾಯಕರ ಅವಶ್ಯಕತೆ ಇರುವುದಾಗಿ ತಿಳಿಸಿರುತ್ತಾರೆ.

ಮುಂದುವರೆದು, 2013-14 ನೇ ಸಾಲಿನ ಆಯವ್ಯಯದಲ್ಲಿ ಘೋಷಿಸಿರುವಂತೆ ಬಡತನ ರೇಖೆಗಿಂತ ಕೆಳಗಿರುವ ಅಂಧ ಮಹಿಳೆಯರಿಗೆ 2 ಹೆರಿಗೆಗಳವರೆಗೆ, ಪ್ರತಿ ಹೆರಿಗೆಯ ನಂತರ 2 ವರ್ಷಗಳ ಅವಧಿಗೆ ಮಗುವಿನ ಆರೋಗ್ಯ ಮತ್ತು ಪೌಷ್ಠಿಕ ಆಹಾರ ಪೋಷಣೆಯ ದೃಷ್ಟಿಯಿಂದ ತಿಂಗಳಿಗೆ ರೂ.2000/- ಗಳ ಶಿಶುಪಾಲನ ಭತ್ಯೆಯನ್ನು 75 ಮಹಿಳೆಯರಿಗೆ ನೀಡಲು ಉದ್ದೇಶಿಸಿದ್ದು, ಯೋಜನೆಯ ಅನುಷ್ಠಾನಕ್ಕೆ ಆಡಳಿತಾತ್ಮಕ ಮಂಜೂರಾತಿ ನೀಡುವುದರ ಜೊತೆ ಪ್ರಸಕ್ತ ಸಾಲಿಗೆ ರೂ.18.00ಲಕ್ಷಗಳ ಆಯವ್ಯಯವನ್ನು ಲೆಕ್ಕಶೀರ್ಷಿಕೆ: 2235-02-101-0-52 ಯೋಜನೆ ಉಪ ಲೆಕ್ಕ ಶೀರ್ಷಿಕೆ 051 ಸಾಮಾನ್ಯ ವೆಚ್ಚಗಳಡಿ ಒದಗಿಸುವಂತೆ, ಕೋರಿರುತ್ತಾರೆ.

ಪ್ರಸ್ತಾವನೆಯನ್ನು ಕೂಲಂಕಷವಾಗಿ ಪರಿಶೀಲಿಸಿ, ಈ ಕೆಳಗಿನಂತೆ ಆದೇಶಿಸಿದೆ.

**ಸರ್ಕಾರದ ಆದೇಶ ಸಂಖ್ಯೆ: ಮಮಇ 265 ಪಿಹೆಚ್‌ಪಿ 2013, ಬೆಂಗಳೂರು**

**ದಿನಾಂಕ:28-8-2013**

ಪ್ರಸ್ತಾವನೆಯಲ್ಲಿ ವಿವರಿಸಿರುವ ಹಿನ್ನೆಲೆಯಲ್ಲಿ, ವಾರ್ಷಿಕ ಆದಾಯ ರೂ.2.50 ಲಕ್ಷಗಳ (ಎರಡು ಲಕ್ಷದ ಐವತ್ತು ರೂಪಾಯಿಗಳು ಮಾತ್ರ) ಮಿತಿಯೊಳಗಿನ ಬಡಕುಟುಂಬಗಳ ದೃಷ್ಠಹೀನ ಮಹಿಳೆಯರಿಗೆ ಜನಿಸುವ ಮಕ್ಕಳಿಗೆ, 2 ಹೆರಿಗೆಯವರೆಗೆ ಪ್ರತಿ ಹೆರಿಗೆ ನಂತರ 2 ವರ್ಷ ಅವಧಿಗೆ ಆರೋಗ್ಯ ಹಾಗೂ ಪೌಷ್ಠಿಕ ಆಹಾರ ದೃಷ್ಟಿಯಿಂದ ತಿಂಗಳಿಗೆ ರೂ.2000/-ಗಳ ಶಿಶುಪಾಲನಾ ಭತ್ಯೆಯನ್ನು 75 ಮಹಿಳೆಯರಿಗೆ ನೀಡುವ ಯೋಜನೆಗೆ ಆಡಳಿತಾತ್ಮಕ ಮಂಜೂರಾತಿಯನ್ನು ನೀಡಿದೆ.

ಸಂಖ್ಯೆ 5157
ದಿನಾಂಕ 31.8.2013

ಈ ಯೋಜನೆಗೆ ಸಂಬಂಧಪಟ್ಟ ಷರತ್ತು ಹಾಗೂ ಮಾರ್ಗಸೂಚಿಗಳನ್ನು ಅನುಬಂಧ -1ರಲ್ಲಿ ಹಾಗೂ ಅರ್ಜಿ ನಮೂನೆಯನ್ನು ಅನುಬಂಧ -2ರಲ್ಲಿ ನೀಡಿದೆ. ಈ ಯೋಜನೆಗೆ ತಗಲುವ ವೆಚ್ಚವನ್ನು 2013-14ನೇ ಸಾಲಿನ ಆಯವ್ಯಯ ಲೆಕ್ಕಶೀರ್ಷಿಕೆ 2235-02-101-0-99 (ಯೋಜನೆ)ರಡಿಯಲ್ಲಿ ಒದಗಿಸಿರುವ ರೂ.800.00 ಲಕ್ಷಗಳ ಅನುದಾನದಿಂದಲೇ ಭರಿಸತಕ್ಕದ್ದು.

ಈ ಆದೇಶವನ್ನು ಯೋಜನಾ ಇಲಾಖೆಯ ಟಿಪ್ಪಣಿ ಸಂಖ್ಯೆ:ಪಿಡಿ 39 ಐಎಂಎಂ 2013 ದಿನಾಂಕ:17.08.2013 ಮತ್ತು ಆರ್ಥಿಕ ಇಲಾಖೆಯ ಟಿಪ್ಪಣಿ ಸಂಖ್ಯೆ: ಆಇ 563 ವೆಚ್ಚ-3 2013, ದಿನಾಂಕ: 28-8-2013 ರಲ್ಲಿ ನೀಡಿರುವ ಸಹಮತಿಯನ್ವಯ ಹೊರಡಿಸಿದೆ.

ಕರ್ನಾಟಕ ರಾಜ್ಯಪಾಲರ ಆಜ್ಞಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬಿ.ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.

ಇವರಿಗೆ:

1) ಮಹಾಲೇಖಪಾಲರು, ಕರ್ನಾಟಕ, ಬೆಂಗಳೂರು
2) ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಬೆಂಗಳೂರು.
3) ನಿರ್ದೇಶಕರು, ವಿಕಲಚೇತನರ ಹಾಗೂ ಹಿರಿಯ ನಾಗರಿಕರ ಸಬಲೀಕರಣ ಇಲಾಖೆ, ಮೋಡಿಯಂ ಬ್ಲಾಕ್, ವಿಶ್ವೇಶ್ವರಯ್ಯ ಗೋಪುರ, ಬೆಂಗಳೂರು.
4) ಎಲ್ಲಾ ಜಿಲ್ಲಾಧಿಕಾರಿಗಳು. (ನಿರ್ದೇಶಕರ ಮುಖಾಂತರ)
5) ಎಲ್ಲಾ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು,ಜಿಲ್ಲಾ ಪಂಚಾಯತ್. (ನಿರ್ದೇಶಕರ ಮುಖಾಂತರ)
6) ಖಜಾನಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲೆ.
7) ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

ಸರ್ಕಾರದ ಆದೇಶ ಸಂಖ್ಯೆ: ಮಮಇ 265 ಪಿಹೆಚ್‌ಪಿ 2013, ದಿನಾಂಕ: 28-8-2013 ಕ್ಕೆ ಅನುಬಂಧ-1

## ಅಂಧ ಮಹಿಳೆಯರಿಗೆ ಜನಿಸುವ ಮಕ್ಕಳ ಆರೈಕೆಗಾಗಿ ಶಿಶುಪಾಲನಾ ಭತ್ಯೆ ನೀಡಲು ಈ ಕೆಳಗಿನಂತೆ ಷರತ್ತು ಹಾಗೂ ಮಾರ್ಗಸೂಚಿ.

1. ವಿಕಲಚೇತನರು ಭಾರತದ ಪ್ರಜೆಯಾಗಿರಬೇಕು. ಅರ್ಜಿ ಸಲ್ಲಿಸಿದ ದಿನಾಂಕಕ್ಕೆ ಕನಿಷ್ಠ 6 ವರ್ಷಗಳು ಕರ್ನಾಟಕದಲ್ಲಿ ವಾಸವಾಗಿರಬೇಕು.
2. ಅಂಧ ಮಹಿಳೆಯ ವಯಸ್ಸು ಕನಿಷ್ಠ 18 ವರ್ಷಕ್ಕಿಂತ ಹೆಚ್ಚಾಗಿರಬೇಕು.
3. ಶಿಶು ಪಾಲನ ಭತ್ಯೆಯು 2 ಹೆರಿಗೆಗೆ ಮಾತ್ರ ಸೀಮಿತವಾಗಿರುತ್ತದೆ.
4. ಕಂದಾಯ ಇಲಾಖೆಯಿಂದ ಪಡೆಯಲಾದ ಆದಾಯ ಪ್ರಮಾಣಪತ್ರವನ್ನು ಕಡ್ಡಾಯವಾಗಿ ಸಲ್ಲಿಸತಕ್ಕದ್ದು. ಅವರುಗಳ ಕುಟುಂಬದ ವಾರ್ಷಿಕ ಆದಾಯ ರೂ.2.50 ಲಕ್ಷಗಳ ಒಳಗಿರಬೇಕು.
5. ಸಹಾಯಕ್ಕಾಗಿ ಬರುವ ವ್ಯಕ್ತಿಯಿಂದ ಶಿಶು ಲಾಲನೆ, ಪಾಲನೆ, ಆರೋಗ್ಯ ಹಾಗೂ ಪೌಷ್ಠಿಕ ಆಹಾರ ಒದಗಿಸುವ ಕುರಿತು ಮುಚ್ಚಳಿಕೆ ಪಡೆಯತಕ್ಕದ್ದು.
6. ಶಿಶು ಪಾಲನ ಭತ್ಯೆಯನ್ನು ಮಗುವಿನ ಆರೋಗ್ಯ, ಪೌಷ್ಠಿಕ ಆಹಾರ ಮತ್ತು ಪಾಲನೆಗೆ ಮಾತ್ರ ಉಪಯೋಗಿಸಲಾಗುವುದೆಂದು ದೃಢೀಕರಿಸತಕ್ಕದ್ದು.
7. ಶಿಶು ಪಾಲನ ಭತ್ಯೆಯನ್ನು ಮಂಜೂರು ಮಾಡುವ ಪ್ರಾಧಿಕಾರವು ಆಯಾ ಜಿಲ್ಲೆಯ ಜಿಲ್ಲಾ ಅಂಗವಿಕಲರ ಕಲ್ಯಾಣಾಧಿಕಾರಿಗಳದ್ದಾಗಿರುತ್ತದೆ

(ಬಿ.ಕಮಲಮ್ಮ)
ಸರ್ಕಾರದ ಅಧೀನ ಕಾರ್ಯದರ್ಶಿ,
ಮಹಿಳೆಯರ ಮತ್ತು ಮಕ್ಕಳ ಅಭಿವೃದ್ಧಿ ಹಾಗೂ ವಿಕಲಚೇತನರ
ಮತ್ತು ಹಿರಿಯ ನಾಗರಿಕರ ಸಬಲೀಕರಣ ಇಲಾಖೆ.